ಕರ್ನಾಟಕ ವಿಧಾನಸಭೆ

ಶುಕ್ರವಾರ ೨೪ನೇ ಏಪ್ರಿಲ್ ೧೯೯೮ರಂದು ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ೧೦.೩೦ ಗಂಟೆಗೆ ಸಮಾವೇಶಗೊಂಡಿತು.

ಉಪಾಧ್ಯಕ್ಷರು (ಶ್ರೀ ಚಂದ್ರಶೇಖರ ಮಾಮನಿ) ಅವರು ಪೀಠವನ್ನು ಅಲಂಕರಿಸಿದ್ದರು

1) ಅಧ್ಯಕ್ಷರ ಅಪ್ಪಣೆ ಮೇರೆಗೆ

ವಿಷಯ: ಶಾಸಕರನ್ನು ಆಶ್ರಯ ಸಮಿತಿ ಅಧ್ಯಕ್ಷರನ್ನಾಗಿ ಮಾಡಿದ್ದರೂ ಈಗ ಮತ್ತೆ ಸಮಿತಿಗೆ ಮೂರು ಜನರನ್ನು ನಾಮಿನೇಟ್ ಮಾಡಲು ಸರ್ಕಾರ ಹೊರಟಿರುವುದು.

ಉಪಾಧ್ಯಕ್ಷರು: ಮೊದಲು ಪ್ರಶ್ನೋತ್ತರ.

ಶ್ರೀ ಬಿ.ಎಸ್.ಯಡಿಯೂರಪ್ಪ: ಮಾನ್ಯ ಉಪಾಧ್ಯಕ್ಷರೆ, ಬಹಳ ಮುಖ್ಯವಾದ ವಿಚಾರ ಇದೆ. ಅದು ಶಾಸಕರಿಗೆ ಅಪಮಾನ ಮಾಡಿರತಕ್ಕದ್ದು. ನಮ್ಮನ್ನು ಆಶ್ರಯ ಸಮಿತಿಯ ಅಧ್ಯಕ್ಷರನ್ನಾಗಿ ಮಾಡಿದ್ದರು. ಆದರೆ ಈಗ ಆ ಸಮಿತಿಗೆ ಅಧಿಕಾರಿಗಳು ಮತ್ತು ಅಧಿಕಾರೇತರರನ್ನು ನಾಮಕರಣ ಮಾಡಲು ಸರ್ಕಾರ ಹೊರಟಿದೆ. ಅವತ್ತು ಇಬ್ಬರು ಇದ್ದದನ್ನು ಈಗ ಮೂರು ಮಂದಿಯನ್ನು ನಾಮಿನೇಟ್ ಮಾಡಲು ಸರ್ಕಾರ ಹೊರಟಿದೆ. ಇದರಿಂದ ಶಾಸಕರಾದ ನಮಗೆ ಅಪಮಾನ ಮಾಡಿದಂತಾಗುತ್ತದೆ. ದಯಮಾಡಿ ಇದನ್ನು ರದ್ದು ಮಾಡಬೇಕು.

(ಗೊಂದಲ)

ಉಪಾಧ್ಯಕ್ಷರು: ಮೊದಲು ಪ್ರಶ್ನೋತ್ತರ ಮುಗಿಯಲಿ. ಅನಂತರ ಅದರ ಬಗ್ಗೆ ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡುತ್ತೇನೆ.

ಶ್ರೀ ಕೆ.ಎಸ್.ಈಶ್ವರಪ್ಪ: ಮಾನ್ಯ ಉಪಾಧ್ಯಕ್ಷರೆ, ನಾಮಿನೇಷನ್ ಮಾಡಿ ಅವರ ಪಕ್ಷದವರಿಗೆ ಓಟಿಂಗ್ ರೈಟ್‌ನ್ನು ಕೊಟ್ಟಿದ್ದಾರೆ. ಅಧಿಕಾರಿಗಳನ್ನೂ ನಾಮಿನೇಷನ್ ಮಾಡಿ ಅವರಿಗೂ ಓಟಿಂಗ್ ರೈಟ್‌ನ್ನು ಕೊಟ್ಟಿದ್ದಾರೆ. ಇದು ಪ್ರಪಂಚದಲ್ಲಿ ಎಲ್ಲೂ ಇಲ್ಲ.

(ಈ ಹಂತದಲ್ಲಿ ಬಿ.ಜೆ.ಪಿ. ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ಹೂಡಿದರು)

(ಗೊಂದಲ)